**ಮೂರನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಕನಕಪುರ**

**<u>ಸಿ.ಸಿ ನಂ. 132/2015</u>**

ದಿನಾಂಕಃ. **25.02.2026.** ರಂದು ಸಾಕ್ಷಿಗೆ ಮದ್ಯಾಹ್ನ **1.35** ಗಂಟೆಗೆ ಪ್ರಮಾಣ ವಚನ ಭೋದಿಸಲಾಯಿತು.

| ಚಾಸಾ-**11** | ಪ್ರಾಸಾ-**4** |
|---|---|
| ಹೆಸರು | - ಜಯರಾಂ ಎಂ.ಕೆ |
| ತಂದೆ ಹೆಸರು | - ಪರ್ವತಯ್ಯ |
| ವಯಸ್ಸು | - **66** |
| ಉದ್ಯೋಗ | - ನಿವೃತ್ತ , ಪಿ.ಎಸ್,ಐ |
| ವಿಳಾಸ | - ಚನ್ನಪಟ್ಟಣ |

**<u>ಮುಖ್ಯವಿಚಾರಣೆ : ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರಿಂದಃ-</u>**

ನಾನು **2013** ರಿಂದ **2016** ರವರೆಗೆ ನಾನು ಸಾತನೂರು ಪೋಲಿಸ್ ಠಾಣೆಯಲ್ಲಿ ಪಿ. ಎಸ್. ಐ ಆಗಿ ಕೆಲಸ ನಿರ್ವಹಿಸಿದ್ದೇನೆ.

ದಿನಾಂಕಃ **08.06.2014** ರಂದು ಚಾ.ಸಾ. **1** ರವರಿಂದ ಕಡತವನ್ನು ಪಡೆದುಕೊಂಡು ತನಿಖೆಯನ್ನು ಮುಂದುವರೆಸಿ ದಿನಾಂಕಃ **17.07.2014** ರಂದು ಎಫ್.ಎಸ್.ಎಲ್. ವರದಿಯನ್ನು ಪಡೆದುಕೊಂಡು ತನಿಖೆಯನ್ನು ಮುಕ್ತಾಯಗೋಳಿಸಿ ದೋಷಾರೋಪಣೆ ಪಟ್ಟಿಯನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿದೆ.

ಸಾಕ್ಷಿ ಒಂದು ಎಫ್.ಎಸ್.ಎಲ್ ವರದಿ ಮತ್ತು ಮಾದರಿ ಶೀಲನ್ನು ನೋಡಿ ಅದರಲ್ಲಿರುವ ಸಹಿಗಳನ್ನು ನೋಡಿ ಗುರುತಿಸಿದ್ದು ಸದರಿ ಎಫ್.ಎಸ್.ಎಲ್.ವರದಿಯನ್ನು ನಿ.ಪಿ.**4** ಎಂದು, ಮಾದರಿ ಶೀಲನ್ನು ನಿ.ಪಿ.**5** ಎಂದು, ಸಾಕ್ಷಿಯ ಸಹಿಗಳನ್ನು ನಿ.ಪಿ **4(**ಎ**)** ಮತ್ತು ನಿ.ಪಿ.**5(**ಎ**)** ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು: ಆರೋಪಿ ಪರ . ಪಿ.ಎಸ್.ಆರ್. ವಕೀಲರಿಂದಃ</u>**

ಈ ಪ್ರಕರಣದಲ್ಲಿ ಯಾವುದೇ ಅಬಕಾರಿ ವಸ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ.

ನಾನು ಎಫ.ಎಸ್.ಎಲ್. ಗೆ ಯಾವುದೇ ಮದ್ಯವನ್ನು ಕಳುಹಿಸಿರುವುದಿಲ್ಲ ಆದರೂ ಪ್ರಕರಣಕ್ಕೆ ಅನುಕೂಲವಾಗಲೆಂದು ಸುಳ್ಳು ಎಫ.ಎಸ್.ಎಲ್ ವರದಿಯನ್ನು ಸ್ವೀಕರಿಸಿಕೊಂಡಿದ್ದೇನೆಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರಕರಣಕ್ಕೂ ಆರೋಪಿಗೂ ಯಾವುದೇ ಸಂಬಂಧ ಇಲ್ಲದಿದ್ದರೂ ಮತ್ತು ತನಿಖೆಯಲ್ಲಿ ಆರೋಪಿ ಯಾವುದೇ ತಪ್ಪು ಮಾಡದೇ ಇರುವುದು ಕಂಡುಬಂದರೂ ಸುಳ್ಳು ದೋಷಾರೋಪಣಾ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಮದ್ಯಾಹ್ನ **1.40** ರವರೆಗೆ ಪಡೆದುಕೊಂಡಿರುತ್ತೇನೆ ಎಂದು ಧೃಢೀಕರಿಸುತ್ತೇನೆ)

ಓದಿ ಹೇಳಿ ಕೇಳಿ ಸರಿ ಇದೆ,
3 ನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.
ಕನಕಪುರ